ಮಧ್ಯಂತರ ಅರ್ಜಿ ಸಂ.**2** ರ ಆದೇಶದ ಪ್ರಕಾರ ಸಾಕ್ಷಿಯನ್ನು

ದಿನಾಂಕಃ 10-03-2026 ರಂದು ಸಾಕ್ಷಿಯನ್ನು ಕರೆಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ **1** ರಿಂದ **4** ನೇ ಪ್ರತಿವಾದಿಯರ ಪರ ಎ.ಜಿ.ಪಿ. ರವರಿಂದ:

ನಾನು ನನ್ನ ಮುಖ್ಯ ವಿಚಾರಣೆಗೆ ಸಂಬಂದಪಟ್ಟಂತೆ ಶಪಥಪತ್ರವನ್ನು ಹಾಜರು ಮಾಡಿದ್ದು, ಅದನ್ನು ಬರೆಯಲು ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿ ಬರೆದ ವಿಷಯಗಳು ನಿಜವಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ದಾಖಲೆಗಳನ್ನು ಈ ಕೆಳಗಿನಂತೆ ಸಲ್ಲಿಸಿರುತ್ತೇನೆ.

1) ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಡಿ-1 ಎಂದು ಗುರುತಿಸಲಾಯಿತು.

2) ಜ್ಞಾಪನಾ ಪತ್ರದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-2 ಎಂದು ಗುರುತಿಸಲಾಯಿತು.

3) ದಿ: 16-07-2025 ರಂದು ಡಿ.ಐ.ಜಿ.ಪಿ. ಆಡಳಿತ ರವರು ಕೋರಿಕೊಂಡ ಪತ್ರದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-3 ಎಂದು ಗುರುತಿಸಲಾಯಿತು.

4) ಮೃತ ಮಹಾಂತಪ್ಪ ಬಸಪ್ಪ ಕೋರಿ ಇವರ ಸೇವಾ ಪುಸ್ತಕದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-4 ಎಂದು ಗುರುತಿಸಲಾಯಿತು.

ನನ್ನ ಪ್ರತಿವಾದ ಪತ್ರದಲ್ಲಿ ಕೇಳಿದಂತೆ ಆದೇಶ ಮಾಡಲು ಪ್ರಾರ್ಥಿಸಿಕೊಳ್ಳುತ್ತೇನೆ.

ಪಾಟೀ ಸವಾಲುಃ ವಾದಿಯರ ಪರ ಶ್ರೀ ಎಸ್.ಎ.ಕೆ. ವಕೀಲರಿಂದ:

**(**ಈ ಹಂತದಲ್ಲಿ ವಾದಿ ಪರ ವಕೀಲರು ಹಾಜರು ಇದ್ದು**,** ಪಾಟೀ ಸವಾಲು ಮಾಡಲು ಕಾಲವಕಾಶ ಕೋರಿ ಮನವಿಯನ್ನು ಮಾಡಿರುತ್ತಾರೆ**.** ಸದರಿ ಮನವಿಯನ್ನು ಪುರಸ್ಕರಿಸಿ ನ್ಯಾಯಾತ ದೃಷ್ಟಿಯಿಂದ ಪಾಟೀ ಸವಾಲಿಗೆ ಕಾಲವಕಾಶ ನೀಡಿ ಪಾಟೀ ಸವಾಲನ್ನು ಮುಂದೂಡಲಾಯಿತು**.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಪ್ರಕಾರ ಬೆರಳಚ್ಚು ಮಾಡಲಾಯಿತು.)

ಓ ಹೇ ಕೆ ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ ಹುನಗುಂದ